ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2019–20** **ದಿನಾಂಕ: 10–06–2019**

## ಪತ್ರಿಕಾ ಆಮಂತ್ರಣ

1. **ಮೂರನೇ ತಂಡದ 392 ಸಿಪಿಸಿ/ಎಪಿಸಿ/ಕೆಎಸ್ಐಎಸ್ಎಫ್ –ಪಿಸಿ ಪುರುಷ ಪ್ರಶಿಕ್ಷಣಾರ್ಥಿಗಳ ನಿರ್ಗಮನ ಪಥಸಂಚಲನ ಕಾರ್ಯಕ್ರಮ:**

   **ದಿನಾಂಕ: 11–06–2019 ಮಂಗಳವಾರ ಸಮಯ : ಬೆಳಿಗ್ಗೆ 6–30 ಗಂಟೆಗೆ**

   **ಸ್ಥಳ: ಪೊಲೀಸ್ ತರಬೇತಿ ಶಾಲೆ, ಥಣಿಸಂದ್ರದ ಕವಾಯತು ಮೈದಾನ, ಬೆಂಗಳೂರು**

## ಪತ್ರಿಕಾ ಪ್ರಕಟಣೆ

# ಹೆಸರಾಂತ ಸಾಹಿತಿ ಡಾ. ಗಿರೀಶ್ ಕಾರ್ನಾಡ್ ಗೌರವಾರ್ಥ ಇಂದು ರಜೆ, ಮೂರು ದಿನಗಳ ಶೋಕಾಚರಣೆ

ಬೆಂಗಳೂರು ಜೂನ್ 10 (ಕರ್ನಾಟಕ ವಾರ್ತೆ)

ಹೆಸರಾಂತ ಸಾಹಿತಿ ಹಾಗೂ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ. ಗಿರೀಶ್ ಕಾರ್ನಾಡ್ ಅವರ ನಿಧನಕ್ಕೆ ತೀವ್ರ ಸಂತಾಪ ಪ್ರಕಟಿಸಿರುವ ರಾಜ್ಯ ಸರ್ಕಾರ, ಡಾ. ಕಾರ್ನಾಡ್ ಅವರ ಗೌರವಾರ್ಥ ರಾಜ್ಯಾದ್ಯಂತ ಎಲ್ಲಾ ಶಾಲಾ ಕಾಲೇಜುಗಳಿಗೆ ಹಾಗೂ ಸರ್ಕಾರಿ ಕಚೇರಿಗಳಿಗೆ ಸೋಮವಾರದಂದು ಸಾರ್ವತ್ರಿಕ ರಜೆಯನ್ನು ಘೋಷಿಸಿದೆ. ಅಲ್ಲದೆ, ಇಂದಿನಿಂದ ಬುಧವಾರದವರೆಗೆ ಒಟ್ಟು ಮೂರು ದಿನಗಳ ಕಾಲ ರಾಜ್ಯಾದ್ಯಂತ ಶೋಕಾಚರಣೆಯನ್ನು ಆಚರಿಸಲು ನಿರ್ಧರಿಸಿದೆ.

ಈ ಅವಧಿಯಲ್ಲಿ ಯಾವುದೇ ಅಧಿಕೃತ ಮನೋರಂಜನಾ ಕಾರ್ಯಕ್ರಮಗಳು ಇರುವುದಿಲ್ಲ ಹಾಗೂ ನಿಯತವಾಗಿ ರಾಷ್ಟ್ರಧ್ವಜವನ್ನು ಹಾರಿಸಲ್ಪಡುವ ಸರ್ಕಾರದ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧಮಟ್ಟದಲ್ಲಿ ಹಾರಿಸಲಾಗುವುದು.

ಈ ಆದೇಶವನ್ನು Negotiable Instrument Act 1881 ರ ಪ್ರಕಾರವು ಕೂಡ ಸಾರ್ವಜನಿಕ ರಜೆ ಎಂದು ಘೋಷಿಸಿದೆ.

ಮೃತರ ಅಂತ್ಯಕ್ರಿಯೆಯನ್ನು ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲು ರಾಜ್ಯ ಸರ್ಕಾರ ಆದೇಶಿಸಿದೆ.